# All India Radio: Bangalore
# Regional Bulletin In Kannada
# 09.11.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು :

1. ವಿದ್ಯಾರ್ಥಿಗಳು ಯಶಸ್ಸು ಮತ್ತು ವೈಫಲ್ಯಗಳನ್ನು ಸಮಾನವಾಗಿ ಸ್ವೀಕರಿಸುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ
2. ಜೈಲಿನಲ್ಲಿ ಖೈದಿಗಳಿಗೆ ಐಷಾರಾಮಿ ಸೌಲಭ್ಯ: ನಾಳೆ ಗೃಹ ಸಚಿವರ ನೇತೃತ್ವದಲ್ಲಿ ಅಧಿಕಾರಿಗಳ ಸಭೆ
3. ಆದೇಶ ಪಾಲಿಸದ ಸಕ್ಕರೆ ಕಾರ್ಖಾನೆಗಳ ವಿರುದ್ಧ ಕ್ರಮ ; ಸರ್ಕಾರ ಎಚ್ಚರಿಕೆ
4. ಕೂಡ್ಲಿಗಿಯಲ್ಲಿ ೭೪ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

<><><><>

ವಿದ್ಯಾರ್ಥಿಗಳು ಪ್ರತಿಫಲಗಳ ಬಗ್ಗೆ ಯೋಚಿಸದೆ ಸಮರ್ಪಣಾ ಮನೋಭಾವದಿಂದ ಕಾರ್ಯ ನಿರ್ವಹಿಸುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದ್ದಾರೆ. ಮೈಸೂರಿನಲ್ಲಿ ಜೆಎಸ್ಎಸ್ ಅಕಾಡೆಮಿ ಮಹಾವಿದ್ಯಾಪೀಠದಲ್ಲಿ ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಯಶಸ್ಸು ಮತ್ತು ವೈಫಲ್ಯಗಳನ್ನು ಸಮಾನವಾಗಿ ಸ್ವೀಕರಿಸುವಂತೆ ತಿಳಿಸಿದ್ದಾರೆ. ಇದೇ ವೇಳೆ ಮೊಬೈಲ್ ವ್ಯಸನದಿಂದ ದೂರವಿರುವಂತೆ ಹಾಗೂ ಗುರು ಹಿರಿಯರು, ಪೋಷಕರು, ಶಿಕ್ಷಕರನ್ನು ಗೌರವಿಸುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ.

**ಧ್ವನಿ : ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್**

ಇದೇ ವೇಳೆ ಮಾತನಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕರ್ನಾಟಕ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ದೇಶದ ಅಗ್ರಗಣ್ಯ ರಾಜ್ಯವಾಗಿದೆ ಎಂದು ಶ್ಲಾಘಿಸಿದರು.

**ಧ್ವನಿ : ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್**

ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಗಣೇಶನ ವಿಗ್ರಹ ನೀಡಿ ಉಪರಾಷ್ಟ್ರಪತಿಗಳನ್ನು ಗೌರವಿಸಿದರು. ಸಮಾರಂಭದಲ್ಲಿ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಶಿವರಾಜ್ ಬಿ.ಪಾಟೀಲ್ ಉಪಸ್ಥಿತರಿದ್ದರು.

<><><><>

ಪರಪ್ಪನ ಅಗ್ರಹಾರ ಜೈಲಿನಲ್ಲಿ ಖೈದಿಗಳಿಗೆ ರಾಜಾತಿಥ್ಯ ನೀಡಿದ ಅಧಿಕಾರಿಗಳನ್ನು ಅಮಾನತು ಮಾಡಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರಾಗೃಹ ಎಡಿಜಿಪಿ ಬಿ.ದಯಾನಂದ್ ರಜೆಯಲ್ಲಿದ್ದರೂ ಅವರ ಜೊತೆ ತಪ್ಪಿತಸ್ಥರನ್ನು ಅಮಾನತುಗೊಳಿಸುವಂತೆ ಚರ್ಚಿಸಲಾಗಿದೆ ಎಂದು ಹೇಳಿದ್ದಾರೆ. ನಟ ದರ್ಶನ್ ದಿಂಬಿಗಾಗಿ ನ್ಯಾಯಾಲಯಕ್ಕೆ ಹೋಗಿದ್ದಾರೆ. ಆದರೆ ಇವರ ಕೈಗೆ ಫೋನ್ ಸಿಗುತ್ತೆ ಎಂದರೆ ಇದನ್ನು ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಶೀಘ್ರವೇ ಪೊಲೀಸ್ ಅಧಿಕಾರಿಗಳ ಸಭೆ ಕರೆದು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><><>

ಪರಪ್ಪನ ಅಗ್ರಹಾರದಲ್ಲಿ ಕೈದಿಗಳಿಗೆ ಐಷಾರಾಮಿ ಸವಲತ್ತುಗಳು ದೊರಕುತ್ತಿರುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಈ ಕುರಿತಂತೆ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸಭೆ ಕರೆದಿದ್ದಾರೆ. ತಪ್ಪಿತಸ್ಥರ ವಿರುದ್ಧ ಗಂಭೀರ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆ ವಿಚಾರ ನ್ಯಾಯಾಲಯದಲ್ಲಿದೆ. ನ್ಯಾಯಾಲಯದ ಆದೇಶದ ಮೇರೆಗೆ ಚುನಾವಣೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಸಕ್ಕರೆ ಕಾರ್ಖಾನೆ ಮಾಲೀಕರು ಸರ್ಕಾರದ ತೀರ್ಮಾನದ ಬಗ್ಗೆ ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಮಾತನಾಡಿ, ಅವರ ಸಮ್ಮುಖದಲ್ಲಿಯೇ ಈ ಬಗ್ಗೆ ತೀರ್ಮಾನ ಮಾಡಲಾಗಿದೆ. ಆದೇಶ ಪಾಲಿಸದ ಸಕ್ಕರೆ ಕಾರ್ಖಾನೆ ಮಾಲಿಕರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ತೆಲಂಗಾಣದಲ್ಲಿ ನಡೆದ ವಿಶೇಷ ಕಾರ್ಯಚರಣೆಯಲ್ಲಿ ತೆಲಂಗಾಣ ಸೈಬರ್ ಭದ್ರತಾ ವಿಭಾಗ ೮೧ ಸೈಬರ್ ವಂಚಕರನ್ನು ಬಂಧಿಸಿದೆ. ಮಹಾರಾಷ್ಟ್ರ, ಕರ್ನಾಟಕ, ಕೇರಳ, ತಮಿಳುನಾಡಿನಲ್ಲಿ ೨೫ ದಿನಗಳ ಕಾಲ ಸಂಘಟಿತ ವಿಶೇಷ ಕಾರ್ಯಚರಣೆ ನಡೆಸಿ ಬಂಧಿಸಲಾಗಿದೆ. ಕರ್ನಾಟಕದಿಂದ ೧೩ ಮಂದಿಯನ್ನು ಬಂಧಿಸಲಾಗಿದೆ ಎಂದು ತೆಲಂಗಾಣ ಸೈಬರ್ ಭದ್ರತಾ ವಿಭಾಗದ ನಿರ್ದೇಶಕಿ ಶಿಖಾ ಗೋಯಲ್ ತಿಳಿಸಿದ್ದಾರೆ. ಬಂಧಿತರಲ್ಲಿ ಮೂವರು ಬ್ಯಾಂಕ್ ಉದ್ಯೋಗಿಗಳು ಸೇರಿದ್ದಾರೆ. ಈಗಾಗಲೇ ತನಿಖಾ ಅಧಿಕಾರಿಗಳು ಆರೋಪಿಗಳಿಗೆ ಸಂಬಂಧಿಸಿದ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿದ್ದಾರೆ.

<><><>

ಒಂದು ಲಕ್ಷದ ೭೦ ಸಾವಿರ ಜನರಿಗೆ ಕುಡಿಯುವ ನೀರು ಒದಗಿಸುವ ಜೊತೆಗೆ ಕೂಡ್ಲಿಗಿಯ ಅಂತರ್ಜಲ ವೃದ್ಧಿಗೆ ಶ್ರಮಿಸಿದ ಶಾಸಕ ಶ್ರೀನಿವಾಸ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ

ಶ್ಲಾಘಿಸಿದ್ದಾರೆ. ಕೂಡ್ಲಿಗಿಯಲ್ಲಿಂದು ೭೪ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಉದ್ಘಾಟಿಸಿ ಹಾಗೂ ಹಲವು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಕೆರೆ ನೀರು ತುಂಬಿಸುವ ಈ ಯೋಜನೆ ರೈತರಿಗೆ ಅತ್ಯಂತ ಉಪಯುಕ್ತವಾಗಿವೆ ಎಂದು ತಿಳಿಸಿದ್ದಾರೆ. ರಾಜ್ಯದ ಜನರ ಮನೆಬಾಗಿಲಿಗೆ ಪ್ರತಿ ತಿಂಗಳು ಸರ್ಕಾರದ ಗ್ಯಾರಂಟಿಗಳು ತಲುಪುತ್ತಿವೆ ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ( ೩೨ ಸೆಕೆಂಡುಗಳು)**

ಇದೇ ವೇಳೆ, ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರಿಗೆ ಅನ್ಯಾಯ ಮಾಡಿದೆ ಎಂದು ದೂರಿದ್ದಾರೆ. ಎಫ್ಆರ್‌ಪಿ ಮತ್ತು ಎಂಎಸ್‌ಪಿ ಎರಡನ್ನು ನಿಗಧಿ ಮಾಡುವುದು ಕೇಂದ್ರ ಸರ್ಕಾರ. ಆದರೆ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಇದನ್ನು ಮರೆಮಾಚಿ ಬೆಳಗಾವಿಗೆ ತೆರಳಿ ಪ್ರತಿಭಟನೆಯ ನಾಟಕ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

<><><>

ಆರ್‌ಎಸ್‌ಎಸ್ ಸಮಸ್ಯೆಗಳನ್ನು ಬೆಂಬಲಿಸುತ್ತದೆ ಹೊರತು ಪಕ್ಷಗಳನ್ನಲ್ಲ ಎಂದು ಆರ್‌ಎಸ್‌ಎಸ್ ಸಂಚಾಲಕ ಮೋಹನ್ ಭಾಗವತ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂಘವು ರಾಷ್ಟ್ರದ ಹಿತಾಶಕ್ತಿಗಳನ್ನು ಪೂರೈಸುವ ನೀತಿಗಳ ಹಿಂದೆ ದೃಢವಾಗಿ ನಿಂತಿದೆ ಎಂದು ಪ್ರತಿಪಾದಿಸಿದ್ದಾರೆ. ರಾಮಮಂದಿರ ಚಳುವಳಿಯನ್ನು ಬೆಂಬಲಿಸಿದ್ದರೆ, ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಿದ್ದೆವು ಎಂದು ಹೇಳಿದ್ದಾರೆ. ಯಾವುದೇ ರಾಜಕೀಯ ಪಕ್ಷದೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಸಂಘದ ಸಿದ್ಧಾಂತವನ್ನು ಒಪ್ಪಿಕೊಂಡರೆ ಎಲ್ಲಾ ಧರ್ಮದವರಿಗೆ ಸ್ವಾಗತ ಎಂದು ತಿಳಿಸಿದ್ದಾರೆ.

<><><>

ಸಂಜೀವಿನಿ ಯೋಜನೆಯಡಿ ರಾಜ್ಯದಲ್ಲಿ ಅತ್ಯುತ್ತಮ ಸಾಧನೆ ತೋರಿದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ಗೆ ರಾಜ್ಯದ ಪ್ರತಿಷ್ಠಿತ "ಕೌಶಲ್ಯ ಕರ್ನಾಟಕ ಪ್ರಶಸ್ತಿ" ಲಭಿಸಿದೆ. ರಾಜ್ಯದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಪ್ರತಿ ವಿಭಾಗವಾರು ತಲಾ ಎರಡರಂತೆ ಒಟ್ಟು ಎಂಟು ಸ್ವಸಹಾಯ ಗುಂಪುಗಳಿಗೆ ಈ ಪ್ರಶಸ್ತಿ ದೊರಕಿದೆ. ಅದರಲ್ಲಿ ಜಿಲ್ಲಾ ಪಂಚಾಯತ್ ಉತ್ತರ ಕನ್ನಡದ ಅಂಕೋಲಾ ತಾಲೂಕಿನ ಭಾವಿಕೇರಿ ಗ್ರಾಮದ ಹಿರಿಹೋನ್ನಪ್ಪ ಸ್ವಸಹಾಯ ಗುಂಪು ಸಮಗ್ರ ವಿಷಯಗಳ ಮೌಲ್ಯ ಮಾಪನಗಳಲ್ಲಿ ನೂರಕ್ಕೆ ತೊಂಬ್ಬತ್ತೇಳು ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ಈ ಪ್ರಶಸ್ತಿಗೆ ಭಾಜನವಾಗಿದೆ. ಈ ಪ್ರಶಸ್ತಿ ಜಿಲ್ಲೆಯ ಅಭಿವೃದ್ಧಿ ಮತ್ತು ಮಹಿಳಾ ಶಕ್ತೀಕರಣ ಕ್ಷೇತ್ರದಲ್ಲಿ ಮತ್ತೊಂದು ಹೆಜ್ಜೆ ಗುರುತು ಆಗಿದೆ. ಸಂಜೀವಿನಿ ಯೋಜನೆಯಡಿ

ಮಹಿಳಾ ಸಬಲೀಕರಣ, ಸ್ವ-ಸಹಾಯ ಗುಂಪುಗಳ ಬಲವರ್ಧನೆ ಮತ್ತು ಆರ್ಥಿಕ ಸ್ವಾವಲಂಬನೆ ಕ್ಷೇತ್ರಗಳಲ್ಲಿ ಜಿಲ್ಲೆಯ ಸಾಧನೆಗೆ ಈ ಗೌರವ ದೊರಕಿದೆ.

<><><><>

ಮುಂದಿನ ೫ ವರ್ಷಗಳಲ್ಲಿ ದೇಶದಲ್ಲಿ ೧೦ ಸಾವಿರದ ೨೩ ಹೊಸ ವೈದ್ಯಕೀಯ ಸೀಟುಗಳು ಲಭ್ಯವಾಗಲಿದ್ದು, ಇದಕ್ಕೆ ಕೇಂದ್ರ ಸರ್ಕಾರ ೧೫ ಸಾವಿರ ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆ ಜೆಜೆಎಂ ವೈದ್ಯಕೀಯ ಕಾಲೇಜಿನ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಟೆಲಿಮೆಡಿಸಿನ್ ಮತ್ತು ಕೃತಕ ಬುದ್ಧಿ ಮತ್ತೆ ಭವಿಷ್ಯದ ವೈದ್ಯಕೀಯ ಸೇವೆಯ ಕೇಂದ್ರವಾಗಲಿದೆ ಎಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>